**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.05.2026 19.35 hrs**

**<>><><*><><<>**

ಮುಖ್ಯಾಂಶಗಳು :

೧.ಪಂಚ ರಾಷ್ಟ್ರಗಳ ಪ್ರವಾಸದ ಮೂರನೇ ಚರಣದಲ್ಲಿ ಸ್ವೀಡನ್ ತಲುಪಿದ ಪ್ರಧಾನಿ ನರೇಂದ್ರ ಮೋದಿ

೨. ಬೆಂಗಳೂರು-ಮುಂಬೈ ನಡುವೆ ಶೀಘ್ರ ವಂದೇ ಭಾರತ್ ಸ್ಲೀಪರ್ ರೈಲು ಸೇವೆ ಆರಂಭ - ರೈಲ್ವೆ ಸಚಿವ ಅಶ್ವಿನಿ ವೈಷ್ಣವ್

೩. ಒಂದೇ ದಿನದಲ್ಲಿ ದಾಖಲೆಯ ೨೫೬.೪ ಗಿಗಾವ್ಯಾಟ್ ವಿದ್ಯುತ್ ಬೇಡಿಕೆ ಪೂರೈಕೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೪. ರಷ್ಯಾ ಮೇಲೆ ಉಕ್ರೇನ್ ಡ್ರೋನ್ ದಾಳಿ; ಭಾರತೀಯ ಕಾರ್ಮಿಕ ಸೇರಿ ನಾಲ್ವರು ಸಾವು

೫. ಐಪಿಎಲ್ ಟಿ-೨೦ ಕ್ರಿಕೆಟ್: ಪಂಜಾಬ್ ಕಿಂಗ್ಸ್ ವಿರುದ್ಧ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪ್ಲೇ ಆಫ್‌ಗೆ ಲಗ್ಗೆ.

**<>><><*><><<>**

ಪಂಚ ರಾಷ್ಟ್ರಗಳ ಪ್ರವಾಸದ ಮೂರನೇ ಚರಣದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಇಂದು ಸಂಜೆ ಸ್ವೀಡನ್‌ನ ಗೋಥೆನ್‌ಬರ್ಗ್ ತಲುಪಿದ್ದಾರೆ. ಸ್ವೀಡನ್ ವಾಯು ಪ್ರದೇಶ ಪ್ರವೇಶಿಸುತ್ತಿದ್ದಂತೆ ಪ್ರಧಾನಿಯವರ ವಿಮಾನಕ್ಕೆ ಸ್ವೀಡನ್‌ನ ಗ್ರಿಪೆನ್ ಯುದ್ಧ ವಿಮಾನಗಳು ಅವರಿಗೆ ಬೆಂಗಾವಲು ನೀಡಿದವು. ಗೋಥೆನ್‌ಬರ್ಗ್ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರನ್ನು ಸ್ವೀಡನ್ ಪ್ರಧಾನಿ ಉಲ್ಫ್ ಕ್ರಿಸ್ಟರ್ಸನ್ ಆತ್ಮೀಯವಾಗಿ ಬರಮಾಡಿಕೊಂಡರು. ಸ್ವೀಡನ್‌ಗೆ ೨ ದಿನಗಳ ಭೇಟಿಯ ಸಂದರ್ಭದಲ್ಲಿ ಪ್ರಧಾನಿ ಮೋದಿಯವರು, ಸ್ವೀಡನ್ ಪ್ರಧಾನಿ ಉಲ್ಫ್ ಕ್ರಿಸ್ಟರ್ಸನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ವ್ಯಾಪಾರ, ಹಸಿರು ಇಂಧನ, ಕೃತಕ ಬುದ್ಧಿಮತ್ತೆ, ಉದಯೋನ್ಮುಖ ತಂತ್ರಜ್ಞಾನ, ಸ್ಟಾರ್ಟ್‌ಅಪ್‌ಗಳು, ರಕ್ಷಣೆ, ಬಾಹ್ಯಾಕಾಶ, ಹವಾಮಾನ ಸೇರಿದಂತೆ ವಿವಿಧ ವಿಷಯಗಳ ಕುರಿತು ಉಭಯ ದೇಶಗಳ ನಡುವಿನ ಸಂಬಂಧವನ್ನು ಮತ್ತಷ್ಟು ಬಲಿಷ್ಠಗೊಳಿಸುವ ಕುರಿತು ಚರ್ಚೆ ನಡೆಸಲಿದ್ದಾರೆ. ಬಳಿಕ ಪ್ರಧಾನಿ ನರೇಂದ್ರ ಮೋದಿಯವರು

ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರೊಂದಿಗೆ ಯುರೋಪಿಯನ್ ರೌಂಡ್ ಟೇಬಲ್ ಫಾರ್ ಇಂಡಸ್ಟ್ರಿ ಸದಸ್ಯರನ್ನುದ್ದೇಶಿಸಿ ಮಾತನಾಡಲಿದ್ದಾರೆ.

<>><><*><><<>

ತಮ್ಮ ಭೇಟಿಯ ನಾಲ್ಕನೇ ಚರಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಸೋಮವಾರ ನಾರ್ವೆಗೆ ತಲುಪಲಿದ್ದು, ಮೂರನೇ ಭಾರತ-ನಾರ್ಡಿಕ್ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಅವರು ನಾರ್ವೆ ರಾಜ ಹರಾಲ್ಡ್ ಮತ್ತು ರಾಣಿ ಸೋಂಜಾ ಅವರನ್ನು ಭೇಟಿ ಮಾಡಲಿದ್ದಾರೆ. ನಾರ್ವೆ ಪ್ರಧಾನಿ ಜೋನಾಸ್ ಗಹರ್ ಸ್ಟೋರೆ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

<>><><*><><<>

ಬೆಂಗಳೂರು ಮತ್ತು ಮುಂಬೈ ನಡುವಿನ ನೂತನ ಎಕ್ಸ್‌ಪ್ರೆಸ್ ರೈಲು ಸೇವೆಗೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಇಂದು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ದಕ್ಷಿಣ ಮತ್ತು ಉತ್ತರ ಕರ್ನಾಟಕದ ಜನರ ಬಹುಕಾಲದ ಬೇಡಿಕೆಗಳು ಈಗ ಈಡೇರುತ್ತಿವೆ. ಬೆಂಗಳೂರು ಮತ್ತು ಮುಂಬೈ ನಡುವಿನ ವಂದೇ ಭಾರತ್ ಸ್ಲೀಪರ್ ರೈಲು ಸೇವೆ ಶೀಘ್ರದಲ್ಲೇ ಪ್ರಾರಂಭವಾಗಲಿದೆ ಎಂದು ತಿಳಿಸಿದರು. ಕರ್ನಾಟಕ ಪ್ರಸ್ತುತ ೧೨ ಜೋಡಿ ವಂದೇ ಭಾರತ್ ರೈಲುಗಳನ್ನು ನಿರ್ವಹಿಸುತ್ತಿದೆ. ಬೆಂಗಳೂರನ್ನು ಹೈದರಾಬಾದ್ ಮತ್ತು ಚೆನ್ನೈಗೆ ಸಂಪರ್ಕಿಸುವ ಬುಲೆಟ್ ರೈಲು ಕಾರಿಡಾರ್‌ಗಳಿಗೆ ಸಹ ಅನುಮೋದನೆ ನೀಡಲಾಗಿದೆ. ಮುಂಬೈ, ಬೆಂಗಳೂರು ಮತ್ತು ಇತರ ಪ್ರಮುಖ ನಗರಗಳನ್ನು ಸಂಪರ್ಕಿಸುವ ರೈಲು ಜಾಲವನ್ನು ದೀರ್ಘಾವಧಿಯಲ್ಲಿ ಏಳು ಸಾವಿರ ಕಿಲೋಮೀಟರ್‌ಗಳಿಗೆ ವಿಸ್ತರಿಸಲು ಯೋಜಿಸಲಾಗಿದೆ. ಬೆಂಗಳೂರು ಉಪನಗರ ರೈಲ್ವೆ ಯೋಜನೆಯಡಿ, ನಾಲ್ಕು ಕಾರಿಡಾರ್‌ಗಳಲ್ಲಿ ಕೆಲಸ ಪ್ರಗತಿಯಲ್ಲಿದೆ ಎಂದು ಅವರು ಮಾಹಿತಿ ನೀಡಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಬೆಂಗಳೂರಿನ ಥಣಿಸಂದ್ರದಲ್ಲಿ ೨೭೦ ಕೋಟಿ ರೂಪಾಯಿ ವೆಚ್ಚದಲ್ಲಿ ವಂದೇ ಭಾರತ್ ಸ್ಲೀಪರ್ ನಿರ್ವಹಣಾ ಘಟಕವನ್ನು ಸ್ಥಾಪಿಸಲಾಗುವುದು ಮತ್ತು ಬೆಂಗಳೂರಿನ ಸರ್ ಎಂ.ವಿಶ್ವೇಶ್ವರಯ್ಯ ಟರ್ಮಿನಲ್‌ನಲ್ಲಿ ೫೨ ಕೋಟಿ ರೂಪಾಯಿಗಳಿಗೂ ಹೆಚ್ಚು ವೆಚ್ಚದಲ್ಲಿ ಚೇರ್ ಕಾರ್ ನಿರ್ವಹಣಾ ಸೌಲಭ್ಯ ಸ್ಥಾಪಿಸಲಾಗುವುದು ಎಂದು ತಿಳಿಸಿದರು. ಅಮೃತ ಭಾರತ್ ನಿಲ್ದಾಣ ಯೋಜನೆಯಡಿಯಲ್ಲಿ, ಕರ್ನಾಟಕದಲ್ಲಿ ೭೧ ರೈಲು ನಿಲ್ದಾಣಗಳನ್ನು ಎರಡು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ವೆಚ್ಚದಲ್ಲಿ ಪುನರಾಭಿವೃದ್ಧಿ ಮಾಡಲಾಗುತ್ತಿದ್ದು, ಒಂಬತ್ತು ನಿಲ್ದಾಣಗಳಲ್ಲಿ ಈಗಾಗಲೇ ಕೆಲಸ ಪೂರ್ಣಗೊಂಡಿದೆ. ೨೦೧೪ ರಿಂದ ಕನಾಟಕದಲ್ಲಿ ಒಂದು ಸಾವಿರದ ೭೦೦

ಕಿಲೋಮೀಟರ್‌ಗಳಿಗೂ ಹೆಚ್ಚು ಹೊಸ ರೈಲು ಮಾರ್ಗಗಳನ್ನು ನಿರ್ಮಿಸಲಾಗಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

<><><*><><<>

ನೇಪಾಳದ ಪರ್ವತಾರೋಹಿ ಕಾಮಿ ರಿಟಾ ಶೆರ್ಪಾ ಇಂದು ದಾಖಲೆಯ ೩೨ನೇ ಬಾರಿಗೆ ಮೌಂಟ್ ಎವರೆಸ್ಟ್ ಏರುವ ಮೂಲಕ ಇತಿಹಾಸ ಸೃಷ್ಟಿಸಿದ್ದಾರೆ.  ೫೬ ವರ್ಷದ ಕಾಮಿ ರಿಟಾ ವಿಶ್ವದ ಅತಿ ಎತ್ತರದ ಶಿಖರವನ್ನು ಅತಿ ಹೆಚ್ಚು ಬಾರಿ ಏರಿದ ತಮ್ಮದೇ ದಾಖಲೆಯನ್ನು ಮುರಿದಿದ್ದಾರೆ. ನೇಪಾಳದ ಕೋಶಿ ಪ್ರಾಂತ್ಯದ ಸೊಲುಖುಂಬು ಜಿಲ್ಲೆಯಲ್ಲಿ ಜನಿಸಿದ ಕಾಮಿ ರಿಟಾ, ೧೯೯೨ರಲ್ಲಿ ತಮ್ಮ ಪರ್ವತಾರೋಹಣಾ ವೃತ್ತಿ ಜೀವನವನ್ನು ಪ್ರಾರಂಭಿಸಿದರು. ೧೯೯೪ರಲ್ಲಿ ಮೊದಲ ಬಾರಿಗೆ ಮೌಂಟ್ ಎವರೆಸ್ಟ್ ಏರಿದರು. ಕಳೆದ ವರ್ಷ ಮೇ ೨೭ರಂದು ಮೌಂಟ್ ಎವರೆಸ್ಟ್‌ನ ತುತ್ತ ತುದಿ ತಲುಪುವ ಮೂಲಕ ೩೧ನೇ ಬಾರಿಗೆ ಪರ್ವತಾರೋಹಣಾ ಪೂರ್ಣಗೊಳಿಸಿದರು. ಇದೇ ವೇಳೆ 'ಪರ್ವತ ರಾಣಿ' ಎಂದು ಜನಪ್ರಿಯವಾಗಿರುವ ಲಕ್ಪ್‌ಪಾ ಶೆರ್ಪಾ ೧೧ನೇ ಬಾರಿಗೆ ಮೌಂಟ್ ಎವರೆಸ್ಟ್ ಏರುವ ಮೂಲಕ ತಮ್ಮದೇ ದಾಖಲೆಯನ್ನು ಸರಿಗಟ್ಟಿದ್ದಾರೆ. ಇವರು ಮೌಂಟ್ ಎವರೆಸ್ಟ್ ಏರಿದ ಮೊದಲ ನೇಪಾಳಿ ಮಹಿಳೆಯಾಗಿದ್ದಾರೆ.

<><><*><><<>

ಭಾರತ ಈಗ ಒಂದೇ ದಿನದಲ್ಲಿ ೨೫೬.೪ ಗಿಗಾವ್ಯಾಟ್‌ನ ದಾಖಲೆಯ ಗರಿಷ್ಠ ವಿದ್ಯುತ್ ಬೇಡಿಕೆಯನ್ನು ಯಶಸ್ವಿಯಾಗಿ ನಿರ್ವಹಿಸಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಪತ್ರಿಕೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು, ನವೀಕರಿಸಬಹುದಾದ ಇಂಧನ ಮೂಲಗಳ ಮೂಲಕ ಶೇಕಡಾ ೩೩ರಷ್ಟು ವಿದ್ಯುತ್ ಬೇಡಿಕೆಯನ್ನು ಪೂರೈಸಲಾಗಿದೆ ಎಂದು ಮಾಹಿತಿ ನೀಡಿದರು.  ಭಾರತದ ವಿದ್ಯುತ್ ಮೂಲಸೌಕರ್ಯ, ಬಲವಾದ, ಹೆಚ್ಚು ಸ್ಥಿತಿಸ್ಥಾಪಕ ಮತ್ತು ಭವಿಷ್ಯಕ್ಕೆ ಸಿದ್ಧವಾದ ಈ ರೂಪಾಂತರವು, ಇಂಧನ ಸಾಮರ್ಥ್ಯದ ತ್ವರಿತ ವಿಸ್ತರಣೆ, ಗ್ರಿಡ್ ಬಲವರ್ಧನೆ ಮತ್ತು ದೇಶದ ಬೆಳವಣಿಗೆಯ ಪ್ರಯಾಣಕ್ಕೆ ವಿದ್ಯುತ್ ಒದಗಿಸುವಲ್ಲಿ ಶುದ್ಧ ಇಂಧನದ ಹೆಚ್ಚುತ್ತಿರುವ ಕೊಡುಗೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

<><><*><><<>

ರಷ್ಯಾ ರಾಜಧಾನಿ ಮಾಸ್ಕೋ ಸಮೀಪ ಉಕ್ರೇನ್ ನಡೆಸಿದ ಡ್ರೋನ್ ದಾಳಿಯಲ್ಲಿ ಭಾರತೀಯ ಕಾರ್ಮಿಕ ಸೇರಿದಂತೆ ಕನಿಷ್ಠ ನಾಲ್ವರು ಸಾವನ್ನಪ್ಪಿದ್ದಾರೆ. ದಾಳಿಯಲ್ಲಿ ಕನಿಷ್ಠ ೧೨ ಜನರು

ಗಾಯಗೊಂಡಿದ್ದು, ಅವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ರಷ್ಯಾ ಅಧಿಕಾರಿಗಳು ತಿಳಿಸಿದ್ದಾರೆ. ಮಾಸ್ಕೋ ಬಳಿಯ ಖಿಮ್ಕಿಯಲ್ಲಿ ಮನೆಯೊಂದಕ್ಕೆ ಡ್ರೋನ್ ಅಪ್ಪಳಿಸಿದ್ದು, ಮಹಿಳೆಯೊಬ್ಬರು ಮೃತಪಟ್ಟಿದ್ದಾರೆ. ಅಲ್ಲದೇ, ಪೊಗೊರೆಲ್ಕಿ ಗ್ರಾಮದಲ್ಲಿ ನಿರ್ಮಾಣ ಹಂತದ ಕಟ್ಟಡಕ್ಕೆ ಡ್ರೋನ್ ಅವಶೇಷಗಳು ಅಪ್ಪಳಿಸಿ, ಭಾರತೀಯ ಕಾರ್ಮಿಕ ಸೇರಿ ಮೂವರು ಪುರುಷರು ಅಸುನೀಗಿದ್ದಾರೆ.  ಡ್ರೋನ್ ದಾಳಿಯಿಂದ ಹಲವಾರು ಕಟ್ಟಡಗಳು ಮತ್ತು ಮೂಲಸೌಕರ್ಯಗಳಿಗೆ ಹಾನಿಯಾಗಿವೆ. ಮಾಸ್ಕೋ ಕಡೆಗೆ ಧಾವಿಸುತ್ತಿದ್ದ ೮೧ ಡ್ರೋನ್‌ಗಳನ್ನು ರಷ್ಯಾದ ವಾಯುಪಡೆ ಹೊಡೆದುರುಳಿಸಿದೆ ಎಂದು ರಷ್ಯಾ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

**<>><><*><><<>**

ತಿರುವನಂತಪುರ-ನವದೆಹಲಿ ರಾಜಧಾನಿ ಎಕ್ಸ್‌ಪ್ರೆಸ್ ರೈಲಿನ ಎರಡು ಬೋಗಿಗಳಲ್ಲಿ ಸಂಭವಿಸಿದ ಬೆಂಕಿ ಅವಘಡದ ಕುರಿತು ರೈಲ್ವೆ ಸಚಿವಾಲಯ ಉನ್ನತ ಮಟ್ಟದ ತನಿಖೆಗೆ ಆದೇಶಿಸಿದೆ.  ಕೋಟಾ ವಿಭಾಗದ ನಾಗ್ದಾ ಸಮೀಪ, ತಿರುವಂತಪುರ-ನವದೆಹಲಿ ರಾಜಧಾನಿ ಎಕ್ಸ್‌ಪ್ರೆಸ್ ರೈಲಿನ ಹಿಂಬದಿಯ ಎರಡು ಬೋಗಿಗಳಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ಈ ಬೋಗಿಗಳಲ್ಲಿ ಒಂದು ಗಾರ್ಡ್ ಕೋಚ್ ಮತ್ತು ಒಂದು ಎ.ಸಿ. ತ್ರಿ ಟಯರ್ ಬೋಗಿ ಸೇರಿವೆ.  ಬೋಗಿಯ ಸುರಕ್ಷತಾ ವ್ಯವಸ್ಥೆಯು ತಕ್ಷಣವೇ ಕಾರ್ಯ ನಿರ್ವಹಿಸಿತು ಮತ್ತು ಸ್ವಯಂಚಾಲಿತವಾಗಿ ರೈಲು ಸಂಚಾರ ಸ್ಥಗಿತಗೊಳಿಸಿತು. ರೈಲು ಸಿಬ್ಬಂದಿ ಕೂಡಲೇ ಈ ಬೋಗಿಗಳನ್ನು ಬೇರ್ಪಡಿಸಿದರು. ಘಟನೆಯಲ್ಲಿ ಯಾವುದೇ ಪ್ರಯಾಣಿಕರಿಗೆ ಗಾಯಗಳಾಗಿಲ್ಲ. ಭಾರತೀಯ ರೈಲ್ವೆಯಾದ್ಯಂತ ಬೋಗಿಗಳ ಸುರಕ್ಷತಾ ಪರಿಶೀಲನಾ ಕಾರ್ಯವನ್ನು ಪ್ರಾರಂಭಿಸಲಾಗಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

**<>><><*><><<>**

ಯುನೈಟೆಡ್ ಅರಬ್ ಎಮಿರೈಟ್ಸ್ - ಯುಎಇ ರಾಜಧಾನಿ ಅಬುಧಾಬಿಯ ಬರಾಕಾ ಪರಮಾಣು ವಿದ್ಯುತ್ ಸ್ಥಾವರದ ಹೊರಗೆ ಡ್ರೋನ್ ದಾಳಿಯಿಂದ ಬೆಂಕಿ ಕಾಣಿಸಿಕೊಂಡಿದೆ.  ಸ್ಥಾವರದ ಹೊರಗೆ ಇರುವ ವಿದ್ಯುತ್ ಜನರೇಟರ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಘಟನೆಯಲ್ಲಿ ಯಾವುದೇ ಸಾವು-ನೋವು ಸಂಭವಿಸಿಲ್ಲ. ವಿಕಿರಣ ಸುರಕ್ಷತಾ ಮಟ್ಟಗಳ ಮೇಲೆ ಯಾವುದೇ ಪರಿಣಾಮ ಬೀರಿಲ್ಲ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ.  ಎಲ್ಲಾ ರಿಯಾಕ್ಟರ್ ಘಟಕಗಳು ಸಾಮಾನ್ಯವಾಗಿ ಕಾರ್ಯ ನಿರ್ವಹಿಸುತ್ತಿದೆ. ಸ್ಥಾವರದ ಸುರಕ್ಷತಾ ವ್ಯವಸ್ಥೆಗಳ ಮೇಲೆ ಪರಿಣಾಮ ಬೀರಿಲ್ಲ. ಪ್ರಸ್ತುತ ಯಾವುದೇ ಗುಂಪು ದಾಳಿಯ ಹೊಣೆ ಹೊತ್ತುಕೊಂಡಿಲ್ಲ ಎಂದು ಯುಎಇ ತಿಳಿಸಿದೆ.

**<>><><*><><<>**

ಹಿಮಾಚಲ ಪ್ರದೇಶದ ಧರ್ಮಶಾಲಾದಲ್ಲಿಂದು ನಡೆದ ದಿನದ ಮೊದಲ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ೨೩ ರನ್‌ಗಳಿಂದ ಭರ್ಜರಿ ಗೆಲುವು ದಾಖಲಿಸಿದೆ ಈ ಮೂಲಕ ಆರ್‌ಸಿಬಿ ಪ್ಲೇ ಆಫ್‌ಗೆ ಲಗ್ಗೆ ಇಟ್ಟಿದೆ. ಮೊದಲು ಬ್ಯಾಟಿಂಗ್ ಮಾಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೨೨ ರನ್ ಗಳಿಸಿತು. ಆರ್‌ಸಿಬಿ ಪರ ವೆಂಕಟೇಶ್ ಅಯ್ಯರ್ ೭೩ ರನ್ ಹಾಗೂ ವಿರಾಟ್ ಕೊಹ್ಲಿ ೫೮ ರನ್ ಗಳಿಸಿದರು. ಗೆಲುವಿನ ಗುರಿ ಬೆನ್ನತ್ತಿದ ಪಂಜಾಬ್ ಕಿಂಗ್ಸ್ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೯೯ ರನ್ ಗಳಿಸಲಷ್ಟೇ ಶಕ್ತವಾಯಿತು. ಆರ್‌ಸಿಬಿ ಪರ ರಸಿಕ್ ಮೂರು ವಿಕೆಟ್ ಕಬಳಿಸಿದರೆ, ಭುವನೇಶ್ವರ್ ಕುಮಾರ್ ಎರಡು ವಿಕೆಟ್ ಪಡೆದರು. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ದಿನದ ಎರಡನೇ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ರಾಜಸ್ತಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><><*><><<>**

ಬ್ಯಾಂಕಾಕ್‌ನಲ್ಲಿ ನಡೆದ ಥೈಲೆಂಡ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಡಬಲ್ಸ್ ವಿಭಾಗದ ಫೈನಲ್‌ನಲ್ಲಿ ಇಂಡೊನೇಷಿಯಾದ ಲಿಯೊ ರೊಲಿ ಕಾರ್ನಾಡೊ ಮತ್ತು ಡೇನಿಯಲ್ ಮಾರ್ಟಿನ್ ವಿರುದ್ಧ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಪರಾಭವಗೊಂಡಿತು.

**<><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**